# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತಮೂರನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಗುರುವಾರ, ದಿನಾಂಕ: 04ನೇ ಫೆಬ್ರವರಿ, 2021**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಐದನೆಯ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆ:**
1ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಕೆ.ಎ.ತಿಪ್ಪೇಸ್ವಾಮಿ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 15 (25) : ಮಾನ್ಯ ಗೃಹ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಐದನೆಯ ಪಟ್ಟಿ

## 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಕಾರ್ಯದರ್ಶಿಯವರು ಸಭೆಯ ಮುಂದಿಡುವುದು.**

01. ಕರ್ನಾಟಕ ಹಣಕಾಸು ಸಂಸ್ಥೆಗಳಲ್ಲಿ ಠೇವಣಿದಾರರ ಹಿತಾಸಕ್ತಿ ಸಂರಕ್ಷಣೆ (ತಿದ್ದುಪಡಿ) ವಿಧೇಯಕ, 2020
02. ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧಾರಣೆ (ಎರಡನೇ ತಿದ್ದುಪಡಿ) ವಿಧೇಯಕ, 2020
03. ಕರ್ನಾಟಕ ಸಾಂಕ್ರಾಮಿಕ ರೋಗಗಳ (ತಿದ್ದುಪಡಿ) ವಿಧೇಯಕ, 2020

## 03. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಚರ್ಚೆ

"2021ನೇ ಜನವರಿ, 28ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಸದಸ್ಯರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಸದಸ್ಯರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ:29.01.2021ರಂದು **ಶ್ರೀ ಆಯನೂರು ಮಂಜುನಾಥ್** ರವರು ಸೂಚಿಸಿದ ಪ್ರಸ್ತಾವದ ಮೇಲೆ ಚರ್ಚೆ:

## 04. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ವಿಷಯದ ಮೇಲೆ ಚರ್ಚೆ

| | | |
|---|---|---|
| **ಶ್ರೀಯುತರುಗಳಾದ:**<br>ಎಸ್.ಆರ್.ಪಾಟೀಲ್ ಮಾನ್ಯ ವಿರೋಧ ಪಕ್ಷದ ನಾಯಕರು,<br>ಎಂ.ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ನಸೀರ್ ಅಹಮದ್ ಅವರುಗಳು | } | ಚಿಕ್ಕಮಗಳೂರು ಜಿಲ್ಲೆಯ, ಶೃಂಗೇರಿ ತಾಲ್ಲೂಕಿನ ಗ್ರಾಮವೊಂದರ ಕ್ರಷರ್‌ನಲ್ಲಿ ಕೆಲಸ ನಿರ್ವಹಿಸುತ್ತಿದ್ದ ಅಪ್ರಾಪ್ತ ಬಾಲಕಿಯ ಮೇಲೆ ಸಾಮೂಹಿಕ ಅತ್ಯಾಚಾರ ನಡೆಸಿರುವ ಘಟನೆಯ ಕುರಿತು |

## 05. ಶಾಸನ ರಚನೆ

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

01. ಕರ್ನಾಟಕ ಹಣಕಾಸು ಸಂಸ್ಥೆಗಳಲ್ಲಿ ಠೇವಣಿದಾರರ ಹಿತಾಸಕ್ತಿ ಸಂರಕ್ಷಣೆ (ತಿದ್ದುಪಡಿ) ವಿಧೇಯಕ, 2020
**ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು) ಅವರು:–**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2020ನೇ ಸಾಲಿನ "ಕರ್ನಾಟಕ ಹಣಕಾಸು ಸಂಸ್ಥೆಗಳಲ್ಲಿ ಠೇವಣಿದಾರರ ಹಿತಾಸಕ್ತಿ ಸಂರಕ್ಷಣೆ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

02. ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ (ಎರಡನೇ ತಿದ್ದುಪಡಿ) ವಿಧೇಯಕ, 2020
**ಶ್ರೀ ಲಕ್ಷ್ಮಣ ಸವದಿ (ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು)** ಅವರು:–

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2020ನೇ ಸಾಲಿನ "ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ (ಎರಡನೇ ತಿದ್ದುಪಡಿ) ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

03. ಕರ್ನಾಟಕ ಸಾಂಕ್ರಾಮಿಕ ರೋಗಗಳ (ತಿದ್ದುಪಡಿ) ವಿಧೇಯಕ, 2020
**ಡಾ: ಕೆ. ಸುಧಾಕರ್ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು)** ಅವರು:–

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2020ನೇ ಸಾಲಿನ "ಕರ್ನಾಟಕ ಸಾಂಕ್ರಾಮಿಕ ರೋಗಗಳ (ತಿದ್ದುಪಡಿ) ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 06. ಗಮನ ಸೆಳೆಯುವ ಸೂಚನೆಗಳು

01. **ಶ್ರೀಯುತರುಗಳಾದ ಪುಟ್ಟಣ್ಣ, ಮರಿತಿಬ್ಬೇಗೌಡ ಮತ್ತು ಕೆ.ಟಿ. ಶ್ರೀಕಂಠೇಗೌಡ** ಅವರುಗಳು ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಬೋಧಕ ಸಿಬ್ಬಂದಿಗಳಿಗೆ 7ನೇ ಎ.ಐ.ಸಿ.ಟಿ.ಇ. ಪರಿಷ್ಕೃತ ವೇತನ ಶ್ರೇಣಿಯನ್ನು ಇದುವರೆವಿಗೂ ನೀಡದಿರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಉಪ ಮುಖ್ಯಮಂತ್ರಿಯವರು, ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯುವುದು.

02. **ಶ್ರೀ ಕೆ.ಹರೀಶ್ ಕುಮಾರ್,** ಅವರು ನ್ಯಾಯಾಲಯದ ಆದೇಶದಂತೆ ಮ್ಯೂಟೇಶನ್ ಮಾಡಿ ಪಹಣಿಯಲ್ಲಿ ಸೂಕ್ತ ಬದಲಾವಣೆ ಮಾಡಲು ಸರಳೀಕೃತ ವ್ಯವಸ್ಥೆ ಜಾರಿಗೆ ತರುವುದರ ಮೂಲಕ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

03. **ಶ್ರೀಮತಿ ಭಾರತಿ ಶೆಟ್ಟಿ,** ಅವರು ರಾಜ್ಯದ ವಿವಿಧ ಇಲಾಖೆಗಳಿಗೆ ಅಗತ್ಯವಿರುವ ಬಟ್ಟೆಗಳನ್ನು ಜವಳಿ ಮತ್ತು ಕೈಮಗ್ಗ ನಿಗಮದಿಂದ ಖರೀದಿಸುವ ಮೂಲಕ ನೇಕಾರರಿಗೆ ರಕ್ಷಣೆ ನೀಡುವ ಕುರಿತು ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಗಮನ ಸೆಳೆಯುವುದು.

04. **ಶ್ರೀ ಎನ್.ರವಿಕುಮಾರ್,** ಅವರು 2020-21ನೇ ಸಾಲಿನಲ್ಲಿ ಹೊಸದಾಗಿ 62 ನರ್ಸಿಂಗ್ ಮತ್ತು 40 ಅಲೈಡ್ ಹೆಲ್ತ್ ಸೈನ್ಸ್ ಕಾಲೇಜುಗಳನ್ನು ಪ್ರಾರಂಭಿಸಲು ಸಮರ್ಪಕವಾಗಿ ಪರಿಶೀಲಿಸದೆ ಅನುಮತಿ ನೀಡಿರುವ ಕುರಿತು ತನಿಖೆ ನಡೆಸುವ ಸಂಬಂಧ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

## 07. ನಿಯಮ 330ರ ಮೇರೆಗೆ

01. **ಶ್ರೀಯುತರುಗಳಾದ ಬಸವರಾಜ ಶಿವಲಿಂಗಪ್ಪ ಹೊರಟ್ಟಿ, ಕೆ.ಟಿ. ಶ್ರೀಕಂಠೇಗೌಡ, ಮರಿತಿಬ್ಬೇಗೌಡ ಮತ್ತು ಪುಟ್ಟಣ್ಣ** ಅವರುಗಳು ದಿನಾಂಕ:10.06.2020ರಂದು ಆರ್ಥಿಕ ಇಲಾಖೆಯವರು ಹೊರಡಿಸಿರುವ ಸುತ್ತೋಲೆ ಸಂಖ್ಯೆ:ಆಇ/157/ವೆಚ್ಚ 8/2020ನ್ನು ಹಿಂಪಡೆದು ವಿವಿಧ ಇಲಾಖೆಗಳಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡುವ ಹಾಗೂ ವೇತನಾನುದಾನಕ್ಕೆ ಒಳಪಡಿಸುವ ವಿಷಯದ ಕುರಿತು ಪ್ರಸ್ತಾಪಿಸುವುದು.

02. **ಶ್ರೀ ಕೆ.ಸಿ. ಕೊಂಡಯ್ಯ** ಅವರು ಹೈದ್ರಾಬಾದ್-ಕರ್ನಾಟಕ (ಕಲ್ಯಾಣ ಕರ್ನಾಟಕ) ಪ್ರದೇಶಾಭಿವೃದ್ಧಿ ಮಂಡಳಿಗೆ ಪ್ರತಿ ವರ್ಷ ಆಯವ್ಯಯದಲ್ಲಿ ಒದಗಿಸುತ್ತಿರುವ ಅನುದಾನ ಹಾಗೂ ಅದರ ಬಳಕೆ ಕುರಿತು ಪ್ರಸ್ತಾಪಿಸುವುದು.

03. **ಡಾ: ವೈ.ಎ. ನಾರಾಯಣಸ್ವಾಮಿ** ಅವರು ಕೋಲಾರ ಜಿಲ್ಲೆಯ ಕೆರೆಗಳಿಗೆ ಸಂಸ್ಕರಿಸಿದ ನೀರನ್ನು ತುಂಬಿಸಲು ರೂಪಿಸಿರುವ ಕೆ.ಸಿ.ವ್ಯಾಲಿ ಯೋಜನೆಯಡಿಯಲ್ಲಿ ನೂರಾರು ಕೋಟಿ ರೂಗಳನ್ನು ವೆಚ್ಚ ಮಾಡಿದ್ದರೂ ನಿರೀಕ್ಷಿತ ಪ್ರಮಾಣದಲ್ಲಿ ಕೆರೆಗಳಿಗೆ ನೀರನ್ನು ತುಂಬಿಸಲು ಆಗದಿರುವ ವಿಷಯದ ಕುರಿತು ಪ್ರಸ್ತಾಪಿಸುವುದು.

...4/..

೦4. **ಶ್ರೀಯುತರುಗಳಾದ ನಸೀರ್ ಅಹಮದ್, ಎಂ.ನಾರಾಯಣಸ್ವಾಮಿ, ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕರು, ಕೆ.ಸಿ.ಕೊಂಡಯ್ಯ, ಪ್ರಕಾಶ್ ಕೆ.ರಾಥೋಡ್ ಮತ್ತು ಮೋಹನ್ ಕುಮಾರ್ ಕೊಂಡಜ್ಜಿ** ಅವರುಗಳು ಕೋಲಾರ ಜಿಲ್ಲೆಯ ಕೆ.ಜಿ.ಎಫ್ ನಗರ ಸಭೆಯ ವ್ಯಾಪ್ತಿಯಲ್ಲಿ ಸುಮಾರು 30-40 ವರ್ಷಗಳಿಂದ ಮಳಿಗೆಗಳನ್ನು ನಿರ್ಮಾಣ ಮಾಡಿ ವ್ಯಾಪಾರ ಮಾಡಿಕೊಂಡು ಬಂದಿರುವ ವ್ಯಾಪಾರಸ್ಥರಿಗೆ ಖಾಯಂ ಆಗಿ ಮಳಿಗೆಗಳನ್ನು ಹಂಚಿಕೆ ಮಾಡುವ ಕುರಿತು ಪ್ರಸ್ತಾಪಿಸುವುದು.

೦5. **ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ, ಮಾನ್ಯ ಸರ್ಕಾರಿ ಮುಖ್ಯ ಸಚೇತಕರು,** ಅವರು ಬೆಳಗಾವಿ ಜಿಲ್ಲೆಯ ಪಶ್ಚಿಮ ಘಟ್ಟ ಪ್ರದೇಶದ ಖಾನಾಪುರ ತಾಲ್ಲೂಕಿನ ನೇರಸೆ, ಶಿರೊಳಿ ಹಾಗೂ ಇತರೆ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿರುವ ಜನರು ಮೂಲಭೂತ ಸೌಲಭ್ಯಗಳಿಲ್ಲದೆ ಶೋಚನೀಯ ಸ್ಥಿತಿ ಎದುರಿಸುತ್ತಿರುವ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**